# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಪಿ. ಮಂಜುನಾಥ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಿರೂರು ಗ್ರಾಮ ಪಂಚಾಯಿತಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ, ಇವರು ಸಾರ್ವಜನಿಕ ನೌಕರರಾಗಿ ದುರ್ವತನೆಯಿಂದ ನಡೆದುಕೊಂಡಿದ್ದರ ನಡವಳಿಕೆ ಕುರಿತು.

ಓದಲಾಗಿದೆ:

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪತ್ರ ಸಂಖ್ಯೆ:ಕಂಪ್ಲೆಂಟ್/ಉಪಲೋಕ್/ಎಂ.ವೈ.ಎಸ್-9071/2017/ಪಿಪಿ, ದಿನಾಂಕ:02-11-2018.

ಪ್ರಸ್ತಾವನೆ :

ಈ ಪ್ರಕರಣದಲ್ಲಿ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ ಪ್ರಕರಣ 12(3)ರ ಅಡಿಯಲ್ಲಿ ಸಲ್ಲಿಸಿರುವ ವರದಿಯಲ್ಲಿ,-

ಶ್ರೀ ಕೃಷ್ಣ ಆರ್. ಚಂದನ ಬಿನ್ ಲೇಟ್ ರಾಮ ಮೊಗವೀರ, ದೊಂಬರ, ಕರಾವಳ್ಳಿ ರಸ್ತೆ, ಶಿರೂರು, ಉಡುಪಿ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೇ) ರವರು ಈ ದೂರನ್ನು, ಶ್ರೀ ಮಂಜುನಾಥ್ ಪಿ. ಪಿ.ಡಿ.ಓ, ಶಿರೂರು ಗ್ರಾಮ ಪಂಚಾಯತ್, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ(ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೇ) ರವರುಗಳ ವಿರುದ್ಧ ತನಿಖೆ ನಡೆಸಿ ಸೂಕ್ತ ಕ್ರಮ ಜರುಗಿಸಬೇಕೆಂದು ಕೋರಿರುತ್ತಾರೆ. ಸದರಿ ದೂರಿನ ಆಧಾರದ ಮೇಲೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 9ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ತನಿಖೆಗೆ ಆದೇಶಿಸಲಾಗಿರುತ್ತದೆ.

ದೂರಿನ ಸಂಕ್ಷಿಪ್ತ ವಿವರ:

ಶಿರೂರು ಗ್ರಾಮದ ಸರ್ವೆ ನಂ:225/1ಬಿಪಿ1 ಸರ್ಕಾರಿ ಸ್ಥಳದಲ್ಲಿ ಸಾರ್ವಜನಿಕ ರಸ್ತೆ ಅಭಿವೃದ್ಧಿಪಡಿಸುವ ಬಗ್ಗೆ ಎದುರುದಾರರು ಯಾವ ರೀತಿಯ ಆದೇಶಗಳನ್ನು ಪಾಲಿಸುವುದಿಲ್ಲ ಪಂಚಾಯತ್ ನಿರ್ಣಯಗಳು, ದಂಡಾಧಿಕಾರಿಗಳ ಆದೇಶ, ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್, ಉಚ್ಚ ನ್ಯಾಯಾಲಯದ ಆದೇಶಗಳನ್ನು ಪಾಲಿಸುವುದಿಲ್ಲ. ಕೆ.ಎ.ಟಿ.ಯಲ್ಲಿ ಸರ್ವೆ ನಂ.1 ಬಿಪಿ 1 ಸರ್ಕಾರಿ ಸ್ಥಳದ ಮೇಲೆ ಯಾವ ರೀತಿಯ ಅಪೀಲು ಇಲ್ಲದಿದ್ದರೂ ಕ್ರಮ ಜರುಗಿಸಿಲ್ಲವೆಂದು ಆರೋಪಿಸಿ ದೂರು ಸಲ್ಲಿಸಿರುತ್ತಾರೆ. ದೂರಿನೊಂದಿಗೆ ದಿನಾಂಕ:05-10-2012ರಂದು ವಿಶೇಷ ತಹಶೀಲ್ದಾರರು, ಕುಂದಾಪುರ ತಾಲ್ಲೂಕು, ಇವರು ಎದುರುದಾರರಿಗೆ ಬರೆದ ಪತ್ರ ಲಗತ್ತಿಸಿದ್ದು, ಪರಿಶೀಲಿಸಲಾಗಿ ಸರ್ವೆ ನಂ.225/1ಬಿಪಿ1ರ ಸರ್ಕಾರಿ ಜಮೀನಿನಲ್ಲಿ ಇರುವ ಸಾರ್ವಜನಿಕ ರಸ್ತೆಯಲ್ಲಿ ಕಟ್ಟಿರುವ ಕಾಂಪೌಂಡನ್ನು ದಿನಾಂಕ:04-10-2012ರಂದು ತೆರವುಗೊಳಿಸಲಾಗಿದ್ದು, ಸದರಿ ರಸ್ತೆಯನ್ನು ಅಭಿವೃದ್ಧಿಗೊಳಿಸುವ ಬಗ್ಗೆ ಗ್ರಾಮ ಪಂಚಾಯತಿಗೆ ಹಸ್ತಾಂತಿಸಲಾಗಿದೆ ಎಂದು ಆದೇಶಿಸಿರುವ ಪತ್ರದ ಪ್ರತಿ, ಆರ್.ಟಿ.ಸಿ. ಪ್ರತಿಗಳನ್ನು ಸಲ್ಲಿಸಿರುತ್ತಾರೆ.

ಎದುರುದಾರರು ದಾಖಲೆಗಳ ಸಹಿತ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ. ಶಿರೂರು ಗ್ರಾಮ ಪಂಚಾಯತ್‌ನ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿ ದಿನಾಂಕ:25/11/2016ರಂದು ಪ್ರಭಾರ ವಹಿಸಿಕೊಂಡಿದ್ದು, 2012ರ ವರ್ಷದಿಂದಲೇ ಶಿರೂರು ಗ್ರಾಮದ ಸರ್ವೆ ನಂ.225/1ಬಿಪಿ1ರಲ್ಲಿಯ 0.11ಎಕರೆ ಸರ್ಕಾರಿ ಸ್ಥಳದಲ್ಲಿ ರಸ್ತೆ ನಿರ್ಮಾಣ ಮಾಡಿ ಕೊಡುವಂತೆ ಕೋರಿ ಗ್ರಾಮ ಪಂಚಾಯತ್‌ಗೆ ಅರ್ಜಿ ಸಲ್ಲಿಸುತ್ತಿದ್ದಾರೆ. ಶ್ರೀ ಮೋಮಿನ್ ಮಹಮ್ಮದ್ ಗೌಸ್ ಎಂಬುವವರು ಶ್ರೀಮತಿ ಅಕ್ಕಣಿ ಶೆಡ್ತಿ ಎಂಬುವವರಿಂದ ಶಿರೂರು ಗ್ರಾಮದ ಸರ್ವೆ ನಂ. 25/1ಬಿರ 1.56 ಎಕರೆ ಜಮೀನನ್ನು ಖರೀದಿ ಮಾಡಲಾಗಿದ್ದು, ಸದರಿ ಖರೀದಿಯನ್ನು ನಿಯಮ ಬಾಹಿರವೆಂದು ಅನೂರ್ಜಿತಗೊಳಿಸಿ ಸ್ಥಳವನ್ನು ಸರ್ಕಾರಕ್ಕೆ ನಿಹಿತಗೊಳಿಸಿ ಸಹಾಯಕ ಕಮೀಷನರ್, ಕುಂದಾಪುರ ಇವರ ನ್ಯಾಯಾಲಯದಲ್ಲಿ ದಿನಾಂಕ:11-06-2012ರಂದು ಆದೇಶವಾಗಿರುತ್ತದೆ. ಸದರಿ ಆದೇಶದ ವಿರುದ್ಧ

ಶ್ರೀ ಮೋಮಿನ್ ಮಹಮ್ಮದ್ ಗೌಸ್ ಎಂಬುವವರು ಕೆ.ಎ.ಟಿ. ಮೇಲ್ಮನವಿ ಸಂಖ್ಯೆ:771/2012ರಂತೆ ಮೇಲ್ಮನವಿ ಸಲ್ಲಿಸಿರುತ್ತಾರೆ.

ಸದರಿ ಮೇಲ್ಮನವಿಯಲ್ಲಿ ಸರ್ವೆ ನಂ. 225/1ಬಿ೧ 0.11.00 ಸ್ಥಳವು ಒಳಗೊಂಡಿರುತ್ತದೆ. ಪ್ರಸ್ತುತ ಸದರಿ ಸರ್ವೆ ನಂಬರ್ ಕಂದಾಯ ಇಲಾಖೆಯ ಪಹಣಿ ದಾಖಲೆಯಲ್ಲಿ 225/1ಬಿಪಿ1 ರಲ್ಲಿ 0.11.00 ಎಕರೆ ಎಂದು ದಾಖಲಾಗಿರುತ್ತದೆ. ಹೀಗಿರುವಾಗ ಸದರಿ ಸ್ಥಳದಲ್ಲಿ ರಸ್ತೆ ನಿರ್ಮಾಣ ಮಾಡಿದಲ್ಲಿ ಕಾನೂನಿನ ಉಲ್ಲಂಘನೆಯಾಗುತ್ತದೆ ಎಂದು ಪಂಚಾಯತ್ ಭಾವಿಸಿರುತ್ತದೆ. ಇದೇ ವಿಷಯದ ಮೇಲೆ ದೂರುದಾರರು ಈಗಾಗಲೇ ಘನ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:35874/2015 ಸಲ್ಲಿಸಿದ್ದು, ನಿಯಮಾನುಸಾರ ಕ್ರಮ ಜರುಗಿಸಲು ಆದೇಶವಿದ್ದು, ಇದೇ ವಿಚಾರದ ಕುರಿತಾಗಿ ಮಾನ್ಯ ಕರ್ನಾಟಕ ಲೋಕಾಯುಕ್ತದಲ್ಲಿ ದೂರು ಸಂಖ್ಯೆ:ಕಂಪ್ಲೇಂಟ್/ ಉಪಲೋಕ್/ ಎಂ.ವೈ.ಎಸ್ /5476/12ರಂತೆ ದೂರು ದಾಖಲಿಸಿದ್ದು, ಪ್ರಕರಣ ಬಾಕಿ ಇರುವುದರಿಂದ ಹಾಗೂ ಕುಂದಾಪುರ ನ್ಯಾಯಾಲಯದಲ್ಲಿ ಪ್ರಕರಣ ನಡೆಯುತ್ತಿರುವುದರಿಂದ ಎರಡೂ ನ್ಯಾಯಾಲಯಗಳ ಆದೇಶ ಎಲ್ಲರ ಮೇಲೂ ಬಂಧನಕಾರಿಯಾಗಿರುವುದರಿಂದ ದೂರಿನ ಮೇಲೆ ತನಿಖೆಯನ್ನು ಮುಂದುವರೆಸುವುದು ಸೂಕ್ತವಲ್ಲ ಎಂದು ಅಭಿಪ್ರಾಯಪಟ್ಟಿರುತ್ತದೆ. ದೂರುದಾರರು ಮತ್ತೆ ಲೋಕಾಯುಕ್ತದಲ್ಲಿ ದೂರು ದಾಖಲಿಸಿ ಸರ್ಕಾರಿ ಶ್ರಮವನ್ನು ವ್ಯರ್ಥ ಮಾಡಿರುತ್ತಾರೆ ಎಂದು ನಮೂದಿಸಿರುತ್ತಾರೆ.

ತನಿಖೆಯಲ್ಲಿ ಕಂಡು ಬಂದ ಅಂಶಗಳು:

(1) ಶಿರೂರು ಗ್ರಾಮದ ಸರ್ವೆ ನಂ.225/1ಬಿಪಿ1 ಸರ್ಕಾರಿ ಸ್ಥಳದಲ್ಲಿ ಸಾರ್ವಜನಿಕ ರಸ್ತೆ ಅಭಿವೃದ್ಧಿಪಡಿಸುವ ಬಗ್ಗೆ ಉಚ್ಚ ನ್ಯಾಯಾಲಯದ ಆದೇಶದಂತೆ ಫಿರ್ಯಾದುದಾರರು ಅರ್ಜಿ ಸಲ್ಲಿಸಿದ್ದು, ಎದುರುದಾರರು ಅರ್ಜಿ ಪರಿಗಣಿಸಿ ಸೂಕ್ತ ಕ್ರಮ ಜರುಗಿಸದೆ ಕರ್ತವ್ಯ ಲೋಪ ಎಸಗಿದ್ದಾರೆಂದು ಆರೋಪಿಸಿರುತ್ತಾರೆ.

(2) ದಿನಾಂಕ:05-01-2012ರಂದು ವಿಶೇಷ ತಹಸೀಲ್ದಾರರು; ಕುಂದಾಪುರ ತಾಲ್ಲೂಕು, ಇವರು ಎದುರುದಾರರ ಕಛೇರಿಗೆ ಪತ್ರ ಬರೆದಿದ್ದು, ಸರ್ವೆ ನಂ.225/1ಬಿಪಿ1 ಸರ್ಕಾರಿ ಜಮೀನಿನಲ್ಲಿ ಇರುವ ಸಾರ್ವಜನಿಕ ರಸ್ತೆಯಲ್ಲಿ ಕಟ್ಟಿರುವ ಕಾಂಪೌಂಡನ್ನು ದಿನಾಂಕ:04-10-2012ರಂದು ತೆರವುಗೊಳಿಸಲಾಗಿದ್ದು, ಸದರಿ ರಸ್ತೆಯನ್ನು ಅಭಿವೃದ್ಧಿಗೊಳಿಸುವ ಬಗ್ಗೆ ರಸ್ತೆಯನ್ನು ಗ್ರಾಮ ಪಂಚಾಯತಿಗೆ ಹಸ್ತಾಂತರಿಸಲಾಗಿದೆ ಎಂದು ನಮೂದಿಸಿರುತ್ತಾರೆ.

(3) ದಿನಾಂಕ:20-06-2013ರಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಸಮಕ್ಷಮ ಗಡಿ ಗುರುತಿಸಲಾಗಿರುತ್ತದೆ ಎಂದು ಬೈಂದೂರು ವಿಶೇಷ ತಹಸೀಲ್ದಾರರು ಮಾಹಿತಿ ನೀಡಿರುತ್ತಾರೆ.

(4) ಡಬ್ಲ್ಯೂಪಿ 35874/2015ರ ದಿನಾಂಕ:07-11-2015ರ ಆದೇಶದ ಪ್ರತಿಯಲ್ಲಿ ಸರ್ವೆ ನಂ.225/1ಬಿಪಿ1 ಜಮೀನಿನಲ್ಲಿ ಅರ್ಜಿದಾರರು ಎದುರುದಾರರಿಗೆ ರಸ್ತೆ ಅಭಿವೃದ್ಧಿಪಡಿಸಲು ಅರ್ಜಿ ನೀಡಿದಲ್ಲಿ ನಿಯಮಾನುಸಾರ ಕ್ರಮ ಜರುಗಿಸಿ 6 ವಾರಗಳಲ್ಲಿ ಅರ್ಜಿಯನ್ನು ಇತ್ಯರ್ಥಪಡಿಸಲು ಆದೇಶ ಮಾಡಿರುತ್ತಾರೆ.

(5) ಫಿರ್ಯಾದುದಾರರು ಎದುರುದಾರರ ಕಛೇರಿಗೆ ದಿನಾಂಕ:25-11-2015ರಂದು ಅಭಿವೃದ್ಧಿಪಡಿಸಲು ಕೋರಿ ಅರ್ಜಿ ಸಲ್ಲಿಸಿದ ಮೇರೆಗೆ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ದಿನಾಂಕ:08-01-2016ರ ತಮ್ಮ ಪತ್ರದಲ್ಲಿ ರಸ್ತೆ ಅಭಿವೃದ್ಧಿಪಡಿಸುವ ಬಗ್ಗೆ ಕ್ರಿಯಾ ಯೋಜನೆಯಲ್ಲಿ ಅವಕಾಶ ಕಲ್ಪಿಸಿ, ಸಭೆಯ ಅನುಮತಿ ಪಡೆದು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿರುತ್ತಾರೆ.

(6) ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಾದ ಎದುರುದಾರರಾದ ಶ್ರೀ ಪಿ. ಮಂಜುನಾಥ್‌ರವರು ಶಿರೂರು ಗ್ರಾಮಪಂಚಾಯತ್‌ನ ಅಧಿಕಾರಿಯಾಗಿ ದಿನಾಂಕ:25-11-2016ರಂದು ಪ್ರಭಾರ ವಹಿಸಿಕೊಂಡಿರುತ್ತಾರೆ.

(7) ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ಪತ್ರ ದಿನಾಂಕ:07-12-2016ರಲ್ಲಿ ಸದರಿ ರಸ್ತೆ ಅಭಿವೃದ್ಧಿಪಡಿಸಲು ಕ್ರಮ ಜರುಗಿಸಬೇಕೆಂದು ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್, ಕುಂದಾಪುರರವರಿಗೆ ಮನವಿ ಮಾಡಿದ್ದು, ಸದರಿ ಇಓರವರು ಎದುರುದಾರರಿಗೆ ಪತ್ರ ಬರೆದು ಕ್ರಮ ಜರುಗಿಸಲು ಸೂಚಿಸಿದ್ದು ಎದುರುದಾರರು ರಸ್ತೆ ಅಭಿವೃದ್ಧಿಪಡಿಸಲು ನಿಯಮಾನುಸಾರ ಯಾವುದೇ ಕ್ರಮ ಜರುಗಿಸಿರುವುದಿಲ್ಲ.

(8) ಕಂಪ್ಲೆಂಟ್/ಉಪಲೋಕ್/ಎಂವೈಎಸ್/5476/2012, ಎಆರ್ಇ-7 ಶಾಖೆಯ ಕಡತ ಪರಿಶೀಲಿಸಲಾಗಿ ಶಿರೂರು ಗ್ರಾಮದ ಸರ್ವೆ ನಂ.225/1ಬಿಪಿ1ರ ಸರ್ಕಾರಿ ಜಮೀನಿನಲ್ಲಿ ಅತಿಕ್ರಮಣವಿದ್ದಲ್ಲಿ ತೆರವುಗೊಳಿಸಿ ಕೈಗೊಂಡ ಕ್ರಮದ ಬಗ್ಗೆ ವರದಿ ಸಲ್ಲಿಸುವಂತೆ ವಿಶೇಷ ತಹಸೀಲ್ದಾರರಿಗೆ ಸಹಾಯಕ ಆಯುಕ್ತರು ದಿನಾಂಕ:11-06-2012ರಂದು ಆದೇಶಿಸಿದ್ದು, ಸದರಿ ಆದೇಶದ ವಿರುದ್ಧ ಕೆಎಟಿ ಅರ್ಜಿ ಸಲ್ಲಿಸಿದ್ದು ಓಎಸ್.37/12 ದಾವೆ ಸಹ ಸಲ್ಲಿಸಿದ್ದು, ರಸ್ತೆ ಅಭಿವೃದ್ಧಿಪಡಿಸಿಲ್ಲವೆಂದು ಈ ಸಂಸ್ಥೆಗೆ ದೂರು ಸಲ್ಲಿಸಿದ್ದು, ಕೆಎಟಿ ಮತ್ತು ಓಎಸ್ ಪ್ರಕರಣಗಳು ಬಾಕಿ ಇದ್ದರಿಂದ ಪ್ರಕರಣದ ತನಿಖೆಯನ್ನು ಮುಕ್ತಾಯ ಮಾಡಿದ್ದು ಇರುತ್ತದೆ. ಪ್ರಸ್ತುತ ಪ್ರಕರಣದಲ್ಲಿ ಉಚ್ಚ ನ್ಯಾಯಾಲಯದ ಆದೇಶದಂತೆ ಎದುರುದಾರರು ಕ್ರಮ ಜರುಗಿಲ್ಲವೆಂದು ಎದುರುದಾರರ ವಿರುದ್ಧ ವಿರುದ್ಧ ಕ್ರಮ ಜರುಗಿಸಲು ಕೋರಿರುತ್ತಾರೆ.

(9) ಎದುರುದಾರರು ದಿನಾಂಕ:25-11-2016ರಂದೇ ಕಛೇರಿ ಪ್ರಭಾರ ವಹಿಸಿಕೊಂಡಿದ್ದು, ರಸ್ತೆಯನ್ನು ಪಂಚಾಯಿತಿಗೆ 2012ರಲ್ಲಿ ಹಸ್ತಾಂತರಿಸಿದ್ದು, 2013ರಲ್ಲಿ ಗಡಿ ಗುರುತಿಸಿಕೊಟ್ಟಿದ್ದು, 2015ರಲ್ಲಿ ಉಚ್ಚ ನ್ಯಾಯಾಲಯದಲ್ಲಿ ರಸ್ತೆ ಅಭಿವೃದ್ಧಿಪಡಿಸಲು ಸಲ್ಲಿಸಿದ ಅರ್ಜಿಯನ್ನು ಇತ್ಯರ್ಥಪಡಿಸಲು ಆದೇಶಿಸಿದ್ದರು ಎದುರುದಾರರು ಕ್ರಮ ಜರುಗಿಸದೆ ಕರ್ತವ್ಯ ಲೋಪ ಎಸಗಿರುವುದು ಕಂಡುಬಂದಿರುತ್ತದೆ.

ಮೇಲೆ ಚರ್ಚಿಸಿದ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವೆ(ನಡತೆ) ನಿಯಮ 1966ರ ನಿಯಮಗಳು 3(1)(ii) & (iii) ರನ್ವಯ ಎದುರುದಾರರು ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡುಬಂದಿದ್ದರಿಂದ, ಎದುರುದಾರರಾದ ಶ್ರೀ ಮಂಜುನಾಥ್ ಪಿ. ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಶಿರೂರು ಗ್ರಾಮ ಪಂಚಾಯತ್, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ, ಇವರ ವಿರುದ್ಧ ಶಿಸ್ತು ನಡವಳಿಕೆ ಕ್ರಮ ಜರುಗಿಸಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಹಾಗೂ ಈ ಪ್ರಾಧಿಕಾರಕ್ಕೆ ಒಪ್ಪಿಸುವಂತೆ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ, ಶಿಸ್ತು ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಿದೆ.

ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಶ್ರೀ ಮಂಜುನಾಥ್ ಪಿ. ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಶಿರೂರು ಗ್ರಾಮ ಪಂಚಾಯತ್, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/518/ಗ್ರಾಪಂಕಾ/2018**
**ಬೆಂಗಳೂರು, ದಿನಾಂಕ:21-03-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಮಂಜುನಾಥ್ ಪಿ. ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಶಿರೂರು ಗ್ರಾಮ ಪಂಚಾಯತ್, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ, ಇವರು ಕರ್ನಾಟಕ ನಾಗರೀಕ ಸೇವಾ(ನಡವಳಿ) ನಿಯಮಗಳು 3(1)(ii) & (iii)ರನ್ವಯ "ದುರ್ನಡತೆ" ಎಸಗಿರುವುದು ಸಾಬೀತಾಗಿರುವುದರಿಂದ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಈ ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ)ನಿಯಮಗಳು, 1957ರ ನಿಯಮ 14-ಎ ರ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಲಾಗಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ)ನಿಯಮಗಳು, 1957ರ ನಿಯಮ 8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

25/3

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿಗಳು:

1) ಮಹಾಲೇಖಪಾಲರು(ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಮೂಲ ದಾಖಲೆಗಳು ಪುಟ ಸಂಖ್ಯೆ: 1 ರಿಂದ 62ನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಉಡುಪಿ ಜಿಲ್ಲೆ.
5) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ.
6) ಶ್ರೀ ಮಂಜುನಾಥ್ ಪಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಶಿರೂರು ಗ್ರಾಮ ಪಂಚಾಯತ್, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ.
7) ಗಣಕ ಕೋಶ.
8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.